# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 712
ಮಾನ್ಯ ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 19/09/2022
ಉತ್ತರಿಸುವ ಸಚಿವರು : ಪ್ರವಾಸೋದ್ಯಮ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು

*****

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆ ಚಿಂಚೋಳಿ ತಾಲ್ಲೂಕಿನ ಚಂದ್ರಪಳ್ಳಿ ಜಲಾಶಯ, ಆಳಂದ ತಾಲ್ಲೂಕಿನ ಅಮರ್ಜಾ ಜಲಾಶಯ ಹಾಗೂ ಕಲಬುರಗಿ ತಾಲ್ಲೂಕಿನ ಕೆರಿಬೋಸಗಾ ಕೆರೆಯನ್ನು ಪ್ರೇಕ್ಷಣೀಯ ಸ್ಥಳವಾಗಿಸಲು ಪ್ರವಾಸೋದ್ಯಮ ಇಲಾಖೆಯಿಂದ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಚಂದ್ರಂಪಳ್ಳಿ ಜಲಾಶಯದಲ್ಲಿ ಜಲ ಕ್ರೀಡೆ ಮತ್ತು ಸಾಹಸ ಕ್ರೀಡೆಗಳನ್ನು ನಡೆಸುವ ಸಲುವಾಗಿ ನಿರ್ವಾಹಕರನ್ನು ಆಯ್ಕೆ ಮಾಡುವ ಸಂಬಂಧ ಇ-ಪ್ರೋಕ್ಯೂರ್‌ಮೆಂಟ್ ಮುಖಾಂತರ ದಿನಾಂಕ:06.09.2022ರಂದು ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆ (ಜೆ.ಎಲ್.ಆರ್.)ಯಿಂದ ಟೆಂಡರ್ ಕರೆಯಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಟಿಓಆರ್/94/ಟಿಡಿಪಿ/2022, ದಿನಾಂಕ: 01.07.2022ರಲ್ಲಿ ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನ ಅಮರ್ಜಾ ಡ್ಯಾಂ ಬಳಿ ಲಭ್ಯವಿರುವ ಸರ್ಕಾರಿ ಜಮೀನಿನಲ್ಲಿ ಸಾರ್ವಜನಿಕರಿಗೆ / ಪ್ರವಾಸಿಗರಿಗೆ ಸುಸಜ್ಜಿತವಾದ ಉದ್ಯಾನವನವನ್ನು ನಿರ್ಮಾಣ ಮಾಡುವ ಕಾಮಗಾರಿಯನ್ನು ರೂ.10.00 ಕೋಟಿಗಳ ಅನುದಾನದಲ್ಲಿ ಕೈಗೊಳ್ಳಲು ಸರ್ಕಾರದ ಅನುಮೋದನೆ ನೀಡಲಾಗಿದೆ.<br><br>ಇಲಾಖೆಯಿಂದ ಕೆರಿಬೋಸಗಾ ಕೆರೆಯಲ್ಲಿ ಯಾವುದೇ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವುದಿಲ್ಲ. |
| ಆ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಭೇಟಿ ನೀಡುವ ಪ್ರವಾಸಿಗರ ವಸತಿ ಸೌಕರ್ಯಕ್ಕಾಗಿ ಜಂಗಲ್ ಲಾಡ್ಜ್ಸ್ ಅಂಡ್ ರೆಸಾರ್ಟ್ಸ್‌ಗಳನ್ನು ಎಲ್ಲೆಲ್ಲಿ ನಿರ್ಮಿಸಲಾಗುತ್ತಿದೆ? | ಕಲಬುರಗಿ ಜಿಲ್ಲೆಯ ಚಿಂಚೋಳಿ ವನ್ಯಜೀವಿ ಅಭಯಾರಣ್ಯದಲ್ಲಿ ಪರಿಸರ ಪ್ರವಾಸಿ ಸೌಲಭ್ಯಗಳನ್ನು ರೂ.199.78 ಲಕ್ಷಗಳ ಅಂದಾಜು ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲು ಸರ್ಕಾರದ ಅನುಮೋದನೆ ನೀಡಿ, ಕಾಮಗಾರಿ ಕೈಗೊಳ್ಳಲು ಮೊದಲ ಕಂತಾಗಿ ರೂ.66.00 ಲಕ್ಷಗಳನ್ನು ಅರಣ್ಯ ವಸತಿ ಮತ್ತು ವಿಹಾರಧಾಮ ಸಂಸ್ಥೆ(ಜಂಗಲ್ ಲಾಡ್ಜ್ಸ್ ಅಂಡ್ ರೆಸಾರ್ಟ್ಸ್)ಗೆ ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಸಂಸ್ಥೆಯು ಕಾಮಗಾರಿಯ ಗುತ್ತಿಗೆದಾರರ ಆಯ್ಕೆಗಾಗಿ ದಿನಾಂಕ:29.08.2022ರಂದು ಟೆಂಡರ್ ಕರೆದಿರುತ್ತದೆ.<br><br>ಯಾದಗಿರಿ ಜಿಲ್ಲೆಯಲ್ಲಿ ಅರಣ್ಯ ವಸತಿ ಮತ್ತು ವಿಹಾರಧಾಮ ಸಂಸ್ಥೆ (ಜಂಗಲ್ ಲಾಡ್ಜ್ಸ್ ಅಂಡ್ ರೆಸಾರ್ಟ್ಸ್)ಯಿಂದ ಪ್ರಸ್ತುತ ಯಾವುದೇ ರೆಸಾರ್ಟ್‌ಗಳನ್ನು ನಿರ್ಮಿಸಲಾಗುತ್ತಿಲ್ಲ. |

**ಸಂಖ್ಯೆ: ಟಿಓಆರ್ 266 ಟಿಡಿವಿ 2022**

**(ಆನಂದ್ ಸಿಂಗ್)**
ಪ್ರವಾಸೋದ್ಯಮ, ಜೀವಿಶಾಸ್ತ್ರ,
ಹಾಗೂ ಪರಿಸರ ಸಚಿವರು